ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ

ಸಿಸಿ ನಂ. 310/2019

ಚಾಸಾ-06 ಫ್ರಾಸಾ-03

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 07.11.2024

ಹೆಸರು ಃ ಸಂತೋಷ ಕುಮಾರ

ತಂದೆಯ ಹೆಸರು ಃ ವೈಜಿನಾಥರಾವ

ವಯಸ್ಸು ಃ 47 ವರ್ಷ

ಉದ್ಯೋಗ ಃ ಅಬಕಾರಿ ನಿರೀಕ್ಷಕರು ಉಪ-ವಿಭಾಗ 16

ವಾಸಸ್ಥಳ ಃ ಬೆಂಗಳೂರು.

-: ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:-

ದಿಃ04.03.2019 ರಿಂದ 31.05.219 ರ ರವರೆಗೆ ಕಲಬುರಗಿಯ ಅಬಕಾರಿ ಉಪ-ವಿಭಾಗ ಉಪ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿಃ04.05.2019 ರಂದು ಚಾಸಾ-3 ರವರಿಂದ ಕಡತಗಳನ್ನು ತೆಗೆದು ಕೊಂಡಿರುತ್ತೇನೆ. ಫ್ರಾದೇಶಿಕ ಸಾರಿಗೆ ಅಧಿಕಾರಿ ಕಲಬುರಗಿ ರವರಿಗೆ ವಾಹನ ನಂ.KA.28/M-7878 Indica Vista ನೇದ್ದರ ಬಗ್ಗೆ "B" Extract ಕೋರಿದ್ದು, ದಿಃ06.05.2019 ರಂದು "B" Extract ವರದಿಯನ್ನು ನೀಡಿರುತ್ತಾರೆ. ಅದನ್ನು ಸ್ವಿಕರಿಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ದಿಃ13.05.2019 ರಂದು ರಾಯಚೂರ ರಾಸಾಯನಿಕ ವಿಶ್ಲೇಷಣಾ ಕೇಂದ್ರಕ್ಕೆ ಚಾಸಾ-4 ರವರನ್ನು ಮುದ್ದೇ ಮಾಲುಗಳ ಪರೀಕ್ಕೆಗೆ ಕಳುಹಿಸಿ ಕೊಟ್ಟಿರುತ್ತೇನೆ. ದಿಃ 14.05.2019 ರಂದು ರಾಸಾಯನಿಕ ವಿಶ್ಲೇಷಣಾ ಕೇಂದ್ರದಿಂದ ವರದಿಯನ್ನು ಪಡೆದುಕೊಂಡು ಕಡತಕ್ಕೆ

ಅಳವಡಿಸಿಕೊಂಡು ಚಾಸಾ-4 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ದಿಃ25.07.2019 ರಂದು ತನಿಖೆ ಪೂರ್ಣಗೊಂಡಿದ್ದರಿಂದ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣೆ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ.

ಸಾಕ್ಷಿಗೆ ಪ್ರಾದೇಶಿಕ ಸಾರಿಗೆ ಅಧಿಕಾರಿ ಕಲಬುರಗಿ ರವರಿಗೆ ನೀಡಿದ ಮನವಿ ಪತ್ರವನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-**7** ಮತ್ತು ಅದರಲ್ಲಿರುವ ಸಾಕ್ಷಿ ಸಹಿಯನ್ನು ನಿಪಿ-**7**(ಎ) ಎಂದು ಗುರುತಿಸಲಾಯಿತು.
ಸಾಕ್ಷಿಗೆ ಪ್ರಾದೇಶಿಕ ಸಾರಿಗೆ ಅಧಿಕಾರಿ ಕಲಬುರಗಿ ರವರು ನೀಡಿದ "B' Extrac ನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-**8** ಮತ್ತು ಅದರಲ್ಲಿರುವ ಸಾಕ್ಷಿ ಸಹಿಯನ್ನು ನಿಪಿ-**8**(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ರಾಯಚೂರ ರಾಸಾಯನಿಕ ವಿಶ್ಲೇಷಣಾ ಕೇಂದ್ರಕ್ಕೆ ನೀಡಿದ ಮನವಿ ಪತ್ರವನ್ನು ತೋರಿಸಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿರುತ್ತದೆ ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**1**(ಬಿ) ಎಂದು ಗುರುತಿಸಲಾಯಿತು.ಸಾಕ್ಷಿಗೆ ರಾಯಚೂರ ರಾಸಾಯನಿಕ ವಿಶ್ಲೇಷಣಾ ಕೇಂದ್ರ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-**9** ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-**9**(ಎ) ಎಂದು ಗುರುತಿಸಲಾಯಿತು. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ.

ತೆರೆದ ನ್ಯಾಯಾಲಯದಲ್ಲಿ ಇರುವ 26 ಪೇಟ್ ಬಾಟಲಗಳನ್ನು ಸಾಕ್ಷಿಗೆ ತೋರಿಸಿದ್ದು, ಸಾಕ್ಷಿಯು ಅವುಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಈಗಾಗಲೇ ಮು.ಮಾ-1 ಮತ್ತು ಮು.ಮಾ-2 ಎಂದು ಗುರುತಿಸಲಾಗಿರುತ್ತದೆ.

<u>ಪಾಟೀ ಸವಾಲುಃ ಆರೋಪಿ ಶ್ರೀ **SJG** ವಕೀಲರಿಂದ</u>

ನಾನು ಚಾಸಾ-3 ರವರಿಂದ ಕಡತಗಳನ್ನು ತೆಗೆದುಕೊಂಡು ಮುಂದಿನ ತನಿಖೆ ನಡೆಸಿ ರಾಸಾಯನಿಕ ವರದಿ ಮತ್ತು ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಂದ "B" Extract ವರದಿಯನ್ನು ಪಡೆದುಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತನಿಗೂ ಈ ಪ್ರಕರಣಕ್ಕೂ ಯಾವುದೇ

ಸಂಬಂಧ ಇರದೇ ಇದ್ದರೂ ಸಹ ಆರೋಪಿ ವಿರುದ್ಧ ಸುಳ್ಳು ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ - **ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ